ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	74(146)
2.	ಸದಸ್ಯರ ಹೆಸರು	:	ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)
3.	ಉತ್ತರಿಸಬೇಕಾದ ದಿನಾಂಕ	:	01.02.2021
4.	ಉತ್ತರಿಸಬೇಕಾದ ಸಚಿವರು	:	ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆಗಳು	ಉತ್ತರಗಳು
ಅ)	ಆರು (6) ಕೋಟಿಗೂ ಮಿಗಿಲಾದ ಜನಸಂಖ್ಯೆಯುಳ್ಳ ರಾಜ್ಯದಲ್ಲಿ ನರರೋಗ ಕಾಯಿಲೆಯಿಂದ ನರಳುತ್ತಿರುವ ರೋಗಿಗಳು ರಾಜ್ಯದ ಏಕೈಕ NIMHANS ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ. ನಿಮ್ಹಾನ್ಸ್ ಸಂಸ್ಥೆಯು ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಕ್ಕೆ ಸಂಬಂಧಿಸಿದಂತೆ ಚಿಕಿತ್ಸೆ ನೀಡುವ ರಾಷ್ಟ್ರೀಯ ಸಂಸ್ಥೆಯಾಗಿದ್ದು, ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಆಡಳಿತಾತ್ಮಕ ನಿಯಂತ್ರಣದಲ್ಲಿರುತ್ತದೆ. ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಭಾರತೀಯ ವೈದ್ಯಕೀಯ ಮಂಡಳಿಯ ಮಾರ್ಗಸೂಚಿಯನುಸಾರ ಅವಶ್ಯವಿರುವ ನರರೋಗ ತಜ್ಞರು ಲಭ್ಯವಿದ್ದು, ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸಲಾಗುತ್ತಿದೆ.
ಆ)	ನರರೋಗಕ್ಕೆ ಸಂಬಂಧಿಸಿದ ವಿವಿಧ ಕಾಯಿಲೆಗಳಿಗೆ ಉತ್ತಮ ಚಿಕಿತ್ಸೆ ನೀಡಲು ಶ್ರಮಿಸುತ್ತಿರುವ ಕೇಂದ್ರ ಸರ್ಕಾರದ NIMHANS ಆಸ್ಪತ್ರೆಯ ಶಾಖೆಗಳನ್ನು ರಾಜ್ಯದ ವಿವಿಧ ಕಡೆ ತೆರೆಯುವ ಅವಶ್ಯಕತೆ ಬಗ್ಗೆ ಸರ್ಕಾರ ಪರಿಶೀಲಿಸಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕ್ರಮ ಕೈಗೊಳ್ಳುವುದೇ?	ನಿಮ್ಹಾನ್ಸ್ ಸಂಸ್ಥೆಯು ರಾಷ್ಟ್ರೀಯ ಸಂಸ್ಥೆಯಾಗಿದ್ದು ರಾಜ್ಯದ ವಿವಿಧ ಕಡೆ ಸದರಿ ಆಸ್ಪತ್ರೆಯ ಶಾಖೆಗಳನ್ನು ತೆರೆಯುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಸಂಖ್ಯೆ: ಎಂಇಡಿ 48 ಎಂಎಸ್‌ಎಫ್ 2021

(ಡಾ: ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು.